# ಸ್ಥಾಯಿ ಸಮಿತಿ ಚುನಾವಣೆಗೆ ಮಧ್ಯಂತರ ತಡೆ

**ಬೆಂಗಳೂರು:** ಬಿಬಿಎಂಪಿಯ ತೆರಿಗೆ ಮತ್ತು ಆರ್ಥಿಕ ಸ್ಥಾಯಿ ಸಮಿತಿ ಅಧ್ಯಕ್ಷ ಸ್ಥಾನದ ಚುನಾವಣೆಗೆ ಹೈಕೋರ್ಟ್ ಶುಕ್ರವಾರ ಮಧ್ಯಂತರ ತಡೆಯಾಜ್ಞೆ ನೀಡಿದೆ.

ಈ ಸಂಬಂಧ ತೆರಿಗೆ ಮತ್ತು ಆರ್ಥಿಕ ಸ್ಥಾಯಿ ಸಮಿತಿಯ ಹಾಲಿ ಅಧ್ಯಕ್ಷೆ ಎಸ್. ಪಿ.ಹೇಮಲತಾ ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ ನ್ಯಾ.ಪಿ.ಬಿ.ಭಜಂತ್ರಿ ಅವರಿದ್ದ ರಜಾ ಕಾಲದ ಏಕಸದಸ್ಯ ನ್ಯಾಯಪೀಠ ಈ ಆದೇಶ ನೀಡಿದೆ.

ವಿಚಾರಣೆ ವೇಳೆ ಕೆಲ ಕಾಲ ವಾದ ಆಲಿಸಿದ ನ್ಯಾಯಪೀಠ, ಸ್ಥಾಯಿ ಸಮಿತಿ ಚುನಾವಣೆಗೆ ಮಧ್ಯಂತರ ತಡೆ ನೀಡಿತು. ಅಲ್ಲದೇ ಅರ್ಜಿಗೆ ಸಂಬಂಧಿಸಿದಂತೆ ಆಕ್ಷೇಪಣೆ ಸಲ್ಲಿಸಲು ಬಿಬಿಎಂಪಿ ಆಯುಕ್ತರು ಹಾಗೂ ಕೌನ್ಸಿಲ್ ಕಾರ್ಯದರ್ಶಿಗೆ ತುರ್ತು ನೋಟಿಸ್ ಜಾರಿಗೆ ಆದೇಶಿಸಿತು. ಜತೆಗೆ ನಗರಾಭಿವೃದ್ಧಿ ಇಲಾಖೆ ಹಾಗೂ ಬೆಂಗಳೂರು ಪ್ರಾದೇಶಿಕ ಆಯುಕ್ತರ ನೋಟಿಸ್ ಸ್ವೀಕರಿಸುವಂತೆ ಸರ್ಕಾರದ ಪರ ವಕೀಲರಿಗೆ ನಿರ್ದೇಶನ ನೀಡಿ ವಿಚಾರಣೆ ಮುಂದೂಡಿತು.

ಮೇಯರ್ ಹಾಗೂ ಉಪ ಮೇಯರ್ ಚುನಾವಣೆ ಜತೆಗೆ 12 ಸ್ಥಾಯಿ ಸಮಿತಿಗಳಿಗೆ ಚುನಾವಣೆ ನಡೆಸಲು ನಗರಾಭಿವೃದ್ಧಿ ಇಲಾಖೆ ಅಧೀನ ಕಾರ್ಯದರ್ಶಿ ಮತ್ತು ಬಿಬಿಎಂಪಿ ಕೌನ್ಸಿಲ್ ಕಾರ್ಯದರ್ಶಿ ಸೆ.23ರಂದು ಹೊರಡಿಸಿದ್ದ ಅಧಿಸೂಚನೆಯನ್ನು ಅರ್ಜಿಯಲ್ಲಿ ಪ್ರಶ್ನಿಸಲಾಗಿದೆ.